ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) 2006–07ನೇ ಸಾಲಿನಲ್ಲಿ ಜನಿಸಿ, ಭಾಗ್ಯಲಕ್ಷ್ಮಿ ಯೋಜನೆಯಡಿ ಮಂಜೂರಾತಿಗಾಗಿ ಬಂದ ಅರ್ಜಿಗಳ ಸಂಖ್ಯೆ 2,36,830.

ಆ) 1675

ಇ) 735

ಈ) ಬಂದಿದೆ.

ಉ) ಸರ್ಕಾರದ ಆದೇಶದಂತೆ 2006–07ನೇ ಸಾಲಿನಲ್ಲಿ ಮಗು ಜನಿಸಿದ ದಿನಾಂಕದಿಂದ 15 ತಿಂಗಳವರೆಗೆ ಅರ್ಜಿ ಸಲ್ಲಿಸಿ ನೋಂದಾಯಿಸಿ ಕೊಳ್ಳಲು ಹಾಗೂ ಮಂಜೂರಾತಿ ನೀಡಲು ಕಾಲಾವಕಾಶ ನೀಡಲಾಗಿದ್ದು, ಈ ಅವಧಿಯ ನಂತರ ಸಲ್ಲಿಸಲ್ಪಟ್ಟ ಅರ್ಜಿಗಳನ್ನು ಯೋಜನೆಯಡಿ ನೋಂದಾಯಿಸಿಕೊಂಡು ಮಂಜೂರಾತಿ ನೀಡಲು ಅವಕಾಶವಿರುವುದಿಲ್ಲ.

ಬಳ್ಳಾರಿಯ ಹೊಸಪೇಟೆ ಸರ್ಕಾರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು

370 (619) ಶ್ರೀ ಆನಂದ ಸಿಂಗ್ (ವಿಜಯನಗರ–ಬಳ್ಳಾರಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ಜಿಲ್ಲೆಯ ಹೊಸಪೇಟೆ ನಗರದಲ್ಲಿ ಹಾಲಿಯಿರುವ 100 ಹಾಸಿಗೆಯ ಸರ್ಕಾರಿ ಆಸ್ಪತ್ರೆಯನ್ನು ಸಾರ್ವಜನಿಕ ಹಿತದೃಷ್ಟಿಯಿಂದ 250 ಹಾಸಿಗೆವುಳ್ಳ ಆಸ್ಪತ್ರೆಯಾಗಿ ಮೇಲ್ದರ್ಜೆಗೆ ಏರಿಸುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಹಂತದಲ್ಲಿದೆಯೇ;

ಆ) ಇದ್ದಲ್ಲಿ, ಇದನ್ನು ಯಾವಾಗ ಮೇಲ್ದರ್ಜೆಗೆ ಏರಿಸಲಾಗುವುದು;

ಇ) ಹಾಲಿ ಹೊಸಪೇಟೆ ತಾಲ್ಲೂಕಿನಲ್ಲಿ ಖಾಲಿಯಿರುವ ಸಿಬ್ಬಂದಿಗಳ ಕೊರತೆಯನ್ನು ತುಂಬುವ ಬಗ್ಗೆ ಏನಾದರೂ ಕ್ರಮ, ಕೈಗೊಳ್ಳಲಾಗಿದೆಯೇ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೊಸಪೇಟೆ ಸಾರ್ವಜನಿಕ ಆಸ್ಪತ್ರೆಯು ಈಗಾಗಲೇ 100 ಹಾಸಿಗೆಗಳ ಆಸ್ಪತ್ರೆಯಾಗಿ ಕಾರ್ಯ ನಿರ್ವಹಿಸುತ್ತಿದ್ದು, ಇಲ್ಲಿನ ಹಾಸಿಗೆಗಳ

ಬಳಕೆ ಪ್ರಮಾಣ ಶೇಕಡ 60 ರಷ್ಟು ಇದ್ದು ಹಾಸಿಗೆ ಸಾಮರ್ಥ್ಯವನ್ನು ಹೆಚ್ಚಿಸುವ ಅವಶ್ಯಕತೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಈ ಆಸ್ಪತ್ರೆಗೆ 80 ಸಿಬ್ಬಂದಿಗಳ ಹುದ್ದೆ ಮಂಜೂರಾಗಿದ್ದು 54 ಸಿಬ್ಬಂದಿ ವರ್ಗದವರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 26 ಹುದ್ದೆಗಳು ಖಾಲಿ ಇವೆ.

ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5,021 ಅರೆ ವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.

ಪ್ರಸ್ತುತ ಗ್ರೂಪ್-ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.

ಟ್ರಕ್ ಟರ್ಮಿನಲ್ ಸ್ಥಾಪಿಸುವ ಬಗ್ಗೆ

371 (620) ಶ್ರೀ ಆನಂದ ಸಿಂಗ್ (ವಿಜಯನಗರ-ಬಳ್ಳಾರಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ಜಿಲ್ಲೆ ಹೊಸಪೇಟೆಯ ಸಾರಿಗೆ ಸಂಪರ್ಕದಲ್ಲಿ ಕೇಂದ್ರ ಬಿಂದುವಾಗಿದ್ದು, ರಸ್ತೆಗಳ ಮೇಲೆ ವಾಹನಗಳ ಓಡಾಟ ಅಧಿಕವಾಗಿ ದಿನೇ ದಿನೇ ಸಂಚಾರ ವ್ಯತ್ಯಯವಾಗುತ್ತಿರುವುದರಿಂದ ಹಾಗೂ ಗಣ್ಯ ವ್ಯಕ್ತಿಗಳು ಇದೇ ಮಾರ್ಗದಲ್ಲಿ ಸಂಚರಿಸುತ್ತಿರುವ ಕಾರಣ ಮಾರ್ಗ ಮಧ್ಯ ಟ್ರಕ್ ಟರ್ಮಿನಲ್ ಅವಶ್ಯವೆಂದು ಟ್ರಕ್ ಟರ್ಮಿನಲ್ ಸ್ಥಾಪನೆಗೆ ಹಣ ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಟರ್ಮಿನಲ್ ಪ್ರಕ್ರಿಯೆಯಗಳು ಯಾವ ಹಂತದಲ್ಲಿವೆ;

ಇ) ಇದಕ್ಕಾಗಿ ಸರ್ಕಾರದಿಂದ ಮಂಜೂರಾದ ಹಣವೆಷ್ಟು; ಹಾಗಿದ್ದಲ್ಲಿ ಕಾಮಗಾರಿ ಪ್ರಕ್ರಿಯೆಗಳು ಯಾವಾಗ ಪ್ರಾರಂಭಿಸಲಾಗುವುದು?